# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 2287

ಸದಸ್ಯರ ಹೆಸರು : ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕನಾಂಕ : 26-03-2021

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ತೆರಿಗೆ ವಂಚಿಸುವ ನಿಟ್ಟಿನಲ್ಲಿ ನಕಲಿ ನೋಂದಣಿ ಸಂಖ್ಯೆ ಅಳವಡಿಸಿಕೊಂಡು ವಾಹನಗಳನ್ನು ಚಲಾಯಿಸುತ್ತಿರುವ ಅನೇಕ ಪ್ರಕರಣಗಳು ವರದಿಯಾಗುತ್ತಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ತೆರಿಗೆ ವಂಚಿಸುವ ನಿಟ್ಟಿನಲ್ಲಿ ನಕಲಿ ನೋಂದಣಿ ಸಂಖ್ಯೆ ಅಳವಡಿಸಿಕೊಂಡು ವಾಹನಗಳನ್ನು ಚಲಾಯಿಸುತ್ತಿರುವ ಕೆಲವೊಂದು ಪ್ರಕರಣಗಳು ವರದಿಯಾಗಿದ್ದು, ವಿವರ ಈ ಕೆಳಕಂಡಂತಿದೆ:<br>1. ಪ್ರಾದೇಶಿಕ ಸಾರಿಗೆ ಕಛೇರಿ, ಬೆಂಗಳೂರು (ಉತ್ತರ) ಯಶವಂತಪುರ ಕಛೇರಿ ವ್ಯಾಪ್ತಿಯಲ್ಲಿ ಎಂ.ಹೆಚ್-50/ಎನ್-9027 ನಕಲಿ ನೋಂದಣಿ ಸಂಖ್ಯೆ ಅಳವಡಿಸಿಕೊಂಡು ಸಂಚರಿಸುತ್ತಿದ್ದ ಬಸ್ಸನ್ನು ದಿನಾಂಕ: 30-09-2020 ರಂದು ಜಪ್ತಿ ಮಾಡಿ ನೆಲಮಂಗಲ ಪ್ರಾದೇಶಿಕ ಸಾರಿಗೆ ಕಛೇರಿ ಆವರಣದಲ್ಲಿ ನಿಲುಗಡೆಗೊಳಿಸಲಾಗಿದೆ. ಈ ಬಸ್ಸನ್ನು ಕಾನೂನು ರೀತಿಯಲ್ಲಿ ಹರಾಜು ಹಾಕುವ ಪ್ರಕ್ರಿಯೆ ಪ್ರಗತಿಯಲ್ಲಿದೆ.<br>2. ಕೆಎ-19/ಯುಸಿ-4457 ನೋಂದಣಿ ಸಂಖ್ಯೆ ಹಾಕಿಕೊಂಡು ಓಡಾಡುತ್ತಿದ್ದ ಬಸ್ಸನ್ನು ಸಂಚಾರಿ ಪೊಲೀಸ್ ಠಾಣೆ (ದಕ್ಷಿಣ)ಯ ಆವರಣದಲ್ಲಿ ಮುಟ್ಟುಗೋಲು ಹಾಕಲಾಗಿದೆ. ಕ್ಯಾಂಪ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂ:0003/2020 ದಿನಾಂಕ:16-01-2020ರಂದು ಪ್ರಕರಣ ದಾಖಲಾಗಿದೆ. ಪ್ರಕರಣ ಸಂ.0003/2020, 5th Addl. Civil Judge & JMFC ಬೆಳಗಾವಿ ಇಲ್ಲಿ ಪ್ರಕರಣ ವಿಚಾರಣೆಯಲ್ಲಿರುತ್ತದೆ.<br>3. ನೆಲಮಂಗಲ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ನಕಲಿ ನೋಂದಣಿ ಸಂಖ್ಯೆಯಲ್ಲಿ ಬಸ್ ಓಡಿಸುತ್ತಿರುವುದನ್ನು ಪತ್ತೆಹಚ್ಚಲಾಗಿದ್ದು, ಅದರಂತೆ, ಎನ್‌ಎಲ್-01/ಬಿ-1794 ನೋಂದಣಿ ಸಂಖ್ಯೆಯನ್ನು ಹಾಕಿಕೊಂಡು ಸಂಚರಿಸುತ್ತಿದ್ದ ವಾಹನವನ್ನು ಜಪ್ತಿಗೊಳಿಸಿ ದಿನಾಂಕ:20-12-2020 ರಂದು ನೆಲಮಂಗಲ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್. ನಂ.226/2020ನ್ನು ದಾಖಲಿಸಲಾಗಿದೆ. |
| ಆ. | ಒಂದೇ ನೋಂದಣಿಯಡಿಯಲ್ಲಿ ಎರಡಕ್ಕಿಂತ ಹೆಚ್ಚು ಬಸ್ಸುಗಳನ್ನು ಚಲಾಯಿಸುತ್ತಿರುವ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆಯೇ; ಈವರೆವಿಗೂ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ (ವಿವರಗಳನ್ನು ನೀಡುವುದು) | ಒಂದೇ ನೋಂದಣಿಯಡಿಯಲ್ಲಿ ಎರಡಕ್ಕಿಂತ ಹೆಚ್ಚು ಬಸ್ಸುಗಳನ್ನು ಚಲಾಯಿಸುತ್ತಿರುವ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ವಿವರ ಈ ಕೆಳಕಂಡಂತಿದೆ:<br>ಎನ್‌ಎಲ್-01/ಬಿ-1794 ನೋಂದಣಿ ಸಂಖ್ಯೆಯನ್ನು ಹಾಕಿಕೊಂಡು ಸಂಚರಿಸುತ್ತಿದ್ದ ಎರಡು ವಾಹನಗಳನ್ನು ಜಪ್ತಿಗೊಳಿಸಿದ್ದು, ಪರಿಶೀಲನೆ ಮಾಡಲಾಗಿ, ಒಂದು ಬಸ್ಸಿನ |

| | | |
|---|---|---|
| | | ನೋಂದಣಿ ಸಂಖ್ಯೆಯು ನಕಲಿಯಾಗಿದ್ದು ಅದನ್ನು ಜಪ್ತಿಗೊಳಿಸಿ, ನೆಲಮಂಗಲ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದು, ಎಫ್.ಐ.ಆರ್. ದಾಖಲಾಗಿದ್ದು ಪ್ರಕರಣವು ವಿಚಾರಣೆಯಲ್ಲಿರುತ್ತದೆ. ಅದರಂತೆ, ವಾಹನ ಸಂಖ್ಯೆ: ಕೆಎ-16/ಎ-7159 ನೋಂದಣಿ ಸಂಖ್ಯೆಯ ಎರಡು ಬಸ್‌ಗಳನ್ನು ಜಪ್ತಿ ಮಾಡಿದ್ದು, ಅದರಲ್ಲಿ ನಕಲಿ ನೋಂದಣಿ ಸಂಖ್ಯೆ ಅಳವಡಿಸಿರುವ ಒಂದು ಬಸ್ಸನ್ನು ಜಪ್ತಿಗೊಳಿಸಿ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್. ದಾಖಲಿಸಿದ್ದು, ಪ್ರಕರಣವು ವಿಚಾರಣಾ ಹಂತದಲ್ಲಿರುತ್ತದೆ. |
| ಇ. | ಬೆಂಗಳೂರಿನಿಂದ ಮಂಗಳೂರು, ಉಡುಪಿ, ಬೆಳಗಾವಿ, ಹೈದ್ರಾಬಾದ್, ಮಣಿಪಾಲ್ ಈ ಬಸ್ ರೂಟ್‌ಗಳಲ್ಲಿ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ; (ವಿವರಗಳನ್ನು ನೀಡುವುದು) | ಈ ಬಗ್ಗೆ 3 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ಅವುಗಳಲ್ಲಿ ಕೆಎ-19/ಯುಸಿ-4457, ಎನ್‌ಎಲ್-01/ಬಿ-1794 ಮತ್ತು ಕೆಎ-16/ಎ-7159 ನೋಂದಣಿ ಸಂಖ್ಯೆ ಒಳಗೊಂಡಿರುತ್ತವೆ. ಸದರಿ ಪ್ರಕರಣಗಳಿಗೆ ಸಂಬಂಧಿಸಿದಂತೆ ತೆಗೆದುಕೊಂಡ ಕ್ರಮದ ವಿವರ ಈ ಕೆಳಕಂಡಂತಿದೆ: |
| ಈ. | ಹಾಗಿದ್ದಲ್ಲಿ, ಇವರ ವಿರುದ್ಧ ತೆಗೆದುಕೊಂಡ ಕ್ರಮಗಳೇನು; | 1. ಕೆಎ-19/ಯುಸಿ-4457 ನೋಂದಣಿ ಸಂಖ್ಯೆ ಹಾಕಿಕೊಂಡು ಸಂಚರಿಸುತ್ತಿದ್ದ ಬಸ್ಸನ್ನು ಜಪ್ತಿಗೊಳಿಸಿ ಬೆಳಗಾವಿ ಸಂಚಾರಿ ಪೊಲೀಸ್ ಠಾಣೆ (ದಕ್ಷಿಣ)ಯ ಆವರಣದಲ್ಲಿ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ಕ್ಯಾಂಪ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂ:0003/2020 ದಿನಾಂಕ:16-01-2020 ರಂದು ಪ್ರಕರಣ ದಾಖಲಿಸಲಾಗಿದೆ. ಪ್ರಕರಣ ಸಂ.0003/2020, 5th Addl. Civil Judge & JMFC ಬೆಳಗಾವಿ ಇಲ್ಲಿ ಪ್ರಕರಣವು ವಿಚಾರಣಾ ಹಂತದಲ್ಲಿದೆ.<br>2. ಒಂದೇ ನೋಂದಣಿ ಸಂಖ್ಯೆಯಲ್ಲಿ ಒಂದಕ್ಕಿಂತ ಹೆಚ್ಚಿನ ಸಂಖ್ಯೆಯ ಬಸ್‌ಗಳು ಓಡಿಸುತ್ತಿರುವುದನ್ನು ಪತ್ತೆಹಚ್ಚಲಾಗಿದ್ದು, ಅದರಂತೆ, ಎನ್‌ಎಲ್-01/ಬಿ-1794 ನೋಂದಣಿ ಸಂಖ್ಯೆಯನ್ನು ಹಾಕಿಕೊಂಡು ಸಂಚರಿಸುತ್ತಿದ್ದ ಎರಡು ವಾಹನಗಳನ್ನು ಜಪ್ತಿಗೊಳಿಸಿ ಒಂದು ವಾಹನಕ್ಕೆ ನೆಲಮಂಗಲ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್. ದಾಖಲಿಸಲಾಗಿದೆ.<br>3. ವಾಹನ ಸಂಖ್ಯೆ.ಕೆಎ-16/ಎ-7159 ನೋಂದಣಿ ಸಂಖ್ಯೆಯ ಎರಡು ಬಸ್‌ಗಳನ್ನು ಜಪ್ತಿ ಮಾಡಿದ್ದು, ಅದರಲ್ಲಿ ನಕಲಿ ನೋಂದಣಿ ಸಂಖ್ಯೆ ಅಳವಡಿಸಿರುವ ಒಂದು ಬಸ್ಸನ್ನು ಜಪ್ತಿಗೊಳಿಸಿ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್. ದಾಖಲಿಸಲಾಗಿದೆ. |
| ಉ. | ಇಂತಹ ಪ್ರಕರಣಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು? | ಇಂತಹ ಪ್ರಕರಣಗಳನ್ನು ತಡೆಗಟ್ಟುವ ಕುರಿತು ರಾಜ್ಯಾದ್ಯಂತ ವಿಶೇಷ ತನಿಖಾ ತಂಡಗಳನ್ನು ರಚಿಸಿ, ಪ್ರವರ್ತನ ಕಾರ್ಯ ಕೈಗೊಳ್ಳಲಾಗುತ್ತಿದ್ದು, ನಕಲಿ ನೋಂದಣಿ ಸಂಖ್ಯೆಗಳನ್ನು ಅಳವಡಿಸಿಕೊಂಡು ಸಂಚರಿಸುವ ವಾಹನಗಳನ್ನು ಪತ್ತೆಹಚ್ಚಿ ಕಾನೂನು ರೀತ್ಯ ಕ್ರಮ ಜರುಗಿಸಲಾಗುತ್ತಿದೆ. |

ಟಿಡಿ 71 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು